ಕರ್ನಾಟಕ ಸರ್ಕಾರ
(ಕೃಷಿ ಇಲಾಖೆ)

ಸಂ: ಕೃಇ/ಆತ್ಮ/ಆಡಳಿತ/ನಿಯೋಜನೆ/2014-15

ಕೃಷಿ ನಿರ್ದೇಶನಾಲಯ,
ಶೇಷಾದ್ರಿ ರಸ್ತೆ, ಬೆಂಗಳೂರು.
ದಿನಾಂಕ:14-01-2015

**ಕಚೇರಿ ಆದೇಶ**

ವಿಷಯ: ಆತ್ಮ ಯೋಜನೆಯಲ್ಲಿ ಯೋಜನಾ ನಿರ್ದೇಶಕರು ಹಾಗೂ ಉಪ ಯೋಜನಾ ನಿರ್ದೇಶಕರು ಇವರ ನಿಯೋಜನೆ ಕುರಿತು.

ಉಲ್ಲೇಖ: ಕಚೇರಿ ಆದೇಶ ಸಂ: ಕೃಇ/ಆತ್ಮ/ಆಡಳಿತ/ನಿಯೋಜನೆ/2014-15 ದಿ 27-5-2014.

***

ವಿಷಯಕ್ಕೆ ಸಂಬಂಧಿಸಿದಂತೆ, ಮೇಲೆ ತಿಳಿಸಿರುವ ಉಲ್ಲೇಖದ ಆದೇಶದಲ್ಲಿ ಜಿಲ್ಲೆಯ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರುಗಳು ಆತ್ಮ ಯೋಜನೆಯ ಯೋಜನಾ ನಿರ್ದೇಶಕರಾಗಿ ಹಾಗೂ ಜಿಲ್ಲೆಯ ಜಿಲ್ಲಾ ನೋಡಲ್ ಅಧಿಕಾರಿಯಾಗಿ ಕಾರ್ಯನಿರ್ವಹಿಸುವಂತೆ ಸೂಚಿಸಲಾಗಿರುತ್ತದೆ. ಆದರೆ, 2014-15 ರ ಸಾಲಿನಲ್ಲಿ ಕೃಷಿ ಹಾಗೂ ಜಲಾನಯನ ಇಲಾಖೆಗಳು ವಿಲೀನಗೊಂಡು ಕೃಷಿ ಇಲಾಖೆಯಾಗಿ ಕಾರ್ಯ ನಿರ್ವಹಿಸುತ್ತಿರುವುದು. ಈ ನಿಟ್ಟಿನಲ್ಲಿ ಇಲಾಖೆಯ ಎಲ್ಲಾ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡುವುದು ಎಲ್ಲಾ ರೀತಿಯ ಅಧಿಕಾರಿಗಳ ಜವಾಬ್ದಾರಿಯಾಗಿರುತ್ತದೆ. ಇದರಲ್ಲಿ ಆತ್ಮ ಯೋಜನೆಯು ಒಂದಾಗಿದ್ದು ಕೃಷಿ ತಾಂತ್ರಿಕತೆಗಳ ಮಾಹಿತಿಯನ್ನು ತ್ವರಿತವಾಗಿ ಪ್ರಸರಣೆ ಮಾಡುವುದು ನಮ್ಮೆಲ್ಲರ ಪ್ರಮುಖವಾದ ಕರ್ತವ್ಯವಾಗಿದೆ. ಇದಕ್ಕಾಗಿ ಕ್ಷೇತ್ರ ಮಟ್ಟದಲ್ಲಿ ತಾಂತ್ರಿಕ ಸಿಬ್ಬಂದಿ ಅಂದರೆ ಇತರೆ ಅಧಿಕಾರಿ/ಸಿಬ್ಬಂದಿ ಜೊತೆ ಹೆಚ್ಚುವರಿಯಾಗಿ ಕೇಂದ್ರ ಸರ್ಕಾರದ ಸೂಚನೆಯಂತೆ ತಾಲ್ಲೂಕ ತಾಂತ್ರಿಕ ವ್ಯವಸ್ಥಾಪಕರು ಹಾಗೂ ಸಹಾಯಕ ತಾಂತ್ರಿಕ ವ್ಯವಸ್ಥಾಪಕರುಗಳನ್ನು ಹೋಬಳಿ ಮಟ್ಟದಲ್ಲಿ ನಿಯೋಜಿಸಲಾಗಿದೆ. ಆದ್ದರಿಂದ ಯೋಜನೆಯ ಮೂಲ ಉದೇಶವನ್ನು ಸಾಧಿಸುವ ನಿಟ್ಟಿನಲ್ಲಿ ಉಲ್ಲೇಖದ ಆದೇಶವನ್ನು ಈ ಕೆಳಗಿನಂತೆ ಮಾರ್ಪಾಡು ಮಾಡಿ ಆದೇಶ ಹೊರಡಿಸಲಾಗಿದೆ.

1. ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು ಆತ್ಮ ಯೋಜನೆಯ ಒಟ್ಟಾರೆ ಅನುಷ್ಠಾನಕ್ಕೆ ಜಿಲ್ಲಾ ನೋಡಲ್ ಅಧಿಕಾರಿಯಾಗಿದ್ದು ಸಂಪೂರ್ಣ ಉಸ್ತುವಾರಿ ಜೊತೆ ಜಿಲ್ಲಾ ಯೋಜನಾ ನಿರ್ದೇಶಕರಾಗಿ ಮತ್ತು ಜಿಲ್ಲಾ ಆತ್ಮ ಚಾಲನಾ ಸಮಿತಿಯ ಸದಸ್ಯ ಕಾರ್ಯದರ್ಶಿಯಾಗಿ ಕಾರ್ಯ ನಿರ್ವಹಿಸುವರು.
2. ಇವರೊಂದಿಗೆ ಇನ್ನು ಮುಂದೆ ಜಿಲ್ಲೆಯಲ್ಲಿರುವ ಉಪ ಕೃಷಿ ನಿರ್ದೇಶಕರು ಅವರ ಕಾರ್ಯವ್ಯಾಪ್ತಿಗೆ ಒಳಪಟ್ಟಂತೆ ಆತ್ಮ ಯೋಜನೆಯ ಅನುಷ್ಠಾನ, ನಿರ್ವಹಣೆ ಮತ್ತು ಉಸ್ತುವಾರಿಯನ್ನು ಉಪ ಯೋಜನಾ ನಿರ್ದೇಶಕರಾಗಿ ಕಾರ್ಯನಿರ್ವಹಿಸುವರು.
3. ಉಪ ಯೋಜನಾ ನಿರ್ದೇಶಕರು ಅಂದರೆ ಉಪ ಕೃಷಿ ನಿರ್ದೇಶಕರು ಇತರ ಎಲ್ಲಾ ಯೋಜನೆಗಳ ಅನುಷ್ಠಾನದಂತೆ ಆತ್ಮ ಯೋಜನೆಯನ್ನು ತಮ್ಮ ವ್ಯಾಪ್ತಿಯಲ್ಲಿ ಪರಿಣಾಮಕಾರಿಯಾಗಿ ನಿರ್ವಹಿಸುವ ಜವಾಬ್ದಾರಿಯಾಗಿರುತ್ತದೆ.
4. ಮೇಲೆ ತಿಳಿಸಿರುವಂತೆ ಸಂಬಂಧಿಸಿದ ಎಲ್ಲಾ ಅಧಿಕಾರಿಗಳು ಕೇಂದ್ರ ಸರ್ಕಾರದ ಮಾರ್ಗಸೂಚಿ 2014 ರನ್ವಯ ಯೋಜನೆಯ ಕಾರ್ಯಾನುಷ್ಠಾನಕ್ಕೆ ಸಂಪೂರ್ಣ ಜವಾಬ್ದಾರಿಯಾಗಿರುತ್ತಾರೆ.

ಮೇಲೆ ತಿಳಿಸಿರುವಂತೆ ಉಲ್ಲೇಖದ ಆದೇಶದಲ್ಲಿರುವ ಉಳಿದ ವಿಷಯಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲವೆಂದು ತಿಳಿಯುವುದು. ಇದರನ್ವಯ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ಯೋಜನೆಯ ಕಾರ್ಯಾನುಷ್ಠಾನಕ್ಕೆ ತ್ವರಿತ ಕ್ರಮಗಳನ್ನು ನಿರ್ವಹಿಸಲು ಸೂಚಿಸಲಾಗಿದೆ.

ಈ ಆದೇಶವು ತಕ್ಷಣದಿಂದ ಅನ್ವಯವಾಗುವುದೆಂದು ತಿಳಿಯುವುದು.

14.1.15
ಕೃಷಿ ಆಯುಕ್ತರು ಹಾಗೂ
ರಾಜ್ಯ ನೋಡಲ್ ಅಧಿಕಾರಿ (ಆತ್ಮ)

ಇವರಿಗೆ ಅಗತ್ಯ ಕ್ರಮಕ್ಕಾಗಿ
ಎಲ್ಲಾ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು (29 ಜಿಲ್ಲೆಗಳು)
ಎಲ್ಲಾ ಉಪ ಕೃಷಿ ನಿರ್ದೇಶಕರು (29 ಜಿಲ್ಲೆಗಳು)
ಎಲ್ಲಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರು.
ನಿರ್ದೇಶಕರು ಸಮೇತಿ (ಉ/ದ) ಕೃವಿವಿ ಬೆಂಗಳೂರು/ದಾರವಾಡ
ಪ್ರತಿಯನ್ನು ಆಧಾರ ಪೂರ್ವಕವಾಗಿ
ಮಾನ್ಯ ಪ್ರಧಾನ ಕಾರ್ಯದರ್ಶಿಗಳು (ಕೃಷಿ ಇಲಾಖೆ) ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ

My com/E:/NEW-2015/Kannada letters/Office order